## ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** ಶ್ರೀ ಅಜಿತ್‌ಕುಮಾರ್ ಅಣ್ಣಾಸಾಹೇಬ್ ಚಿಗರೆ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಇಂಗಳಿ ಗ್ರಾಮ ಪಂಚಾಯತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಮಾನ್ಯ ಉಪಲೋಕಾಯುಕ್ತ ವರದಿಯ ಶಿಫಾರಸ್ಸಿನನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: Compt/UPLOK/BGM/2795/2013/PP, ದಿನಾಂಕ 28.09.2016
2) ಇದೇ ಸಮಸಂಖ್ಯೆಯ ಕಾರಣ ಕೇಳಿ ನೋಟೀಸ್, ದಿನಾಂಕ 10.01.2017
3) ಶ್ರೀ ಅಜಿತ್‌ಕುಮಾರ್ ಅಣ್ಣಾಸಾಹೇಬ್ ಚಿಗರೆ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಇಂಗಳಿ ಗ್ರಾಮ ಪಂಚಾಯತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಕಾರಣ ಕೇಳಿ ನೋಟೀಸಿಗೆ ಸಲ್ಲಿಸಿರುವ ಉತ್ತರ, ದಿನಾಂಕ 02.02.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(3) ರ ಮಾನ್ಯ ಉಪಲೋಕಾಯುಕ್ತ ವರದಿಯಲ್ಲಿನ ಶಿಫಾರಸ್ಸಿನಲ್ಲಿ, ಶ್ರೀ ಅಜಿತ್‌ಕುಮಾರ್ ಅಣ್ಣಾಸಾಹೇಬ್ ಚಿಗರೆ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಇಂಗಳಿ ಗ್ರಾಮ ಪಂಚಾಯತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇಂಗಳಿ ಗ್ರಾಮ ಪಂಚಾಯತಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಮತ್ತು ವಸತಿ ಯೋಜನೆ ಅನುಷ್ಠಾನದಲ್ಲಿ ಅವ್ಯವಹಾರ ಎಸಗಿ, ಹಣ ದುರುಪಯೋಗಪಡಿಸಿಕೊಂಡು ಕರ್ತವ್ಯಲೋಪ ಎಸಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರಡಿ ಕ್ರಮ ಜರುಗಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಸದರಿಯವರಿಗೆ ಗ್ರಾಮ ಪಂಚಾಯತಿ ಸದಸ್ಯತ್ವದಿಂದ ತೆಗೆದು ಹಾಕಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43ಎ ರಡಿ ಸದರಿಯವರಿಗೆ ಸರ್ಕಾರದಿಂದ ಕಾರಣ ಕೇಳಿ ನೋಟೀಸ್ ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ (3) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43ಎ ರನ್ವಯ ಗ್ರಾಮ ಪಂಚಾಯತಿ ಸದಸ್ಯ ಸ್ಥಾನದಿಂದ ಏಕೆ ತೆಗೆದು ಹಾಕಬಾರದು ಎಂಬುದರ ಬಗ್ಗೆ 15 ದಿನಗಳೊಳಗಾಗಿ ವಿವರಣೆ ನೀಡುವಂತೆ ಶ್ರೀ ಅಜಿತ್‌ಕುಮಾರ್ ಅಣ್ಣಾಸಾಹೇಬ್ ಚಿಗರೆ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಇಂಗಳಿ ಗ್ರಾಮ ಪಂಚಾಯತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರಿಗೆ ಸರ್ಕಾರದಿಂದ ನೀಡಲಾದ ಕಾರಣ ಕೇಳಿ ನೋಟೀಸಿಗೆ ಕೆಳಕಂಡಂತೆ ಉತ್ತರಗಳನ್ನು ಸಲ್ಲಿಸಿರುತ್ತಾರೆ.

1) ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಕಾಮಗಾರಿಗಳನ್ನು ಒಳ್ಳೆಯ ರೀತಿಯಲ್ಲಿ ಪೂರ್ಣಗೊಳಿಸಿದ್ದು, ಕಾಮಗಾರಿ ವಿವರಗಳನ್ನು ಸಲ್ಲಿಸಿರುತ್ತಾರೆ.
2) ಇಂಗಳಿ ಗ್ರಾಮದ ವಸತಿ ರಹಿತರಿಗೆ ದಿನಾಂಕ 08.06.2012 ರ ಗ್ರಾಮ ಸಭೆ ಠರಾವು ಅನ್ವಯ 31 ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡಿದ್ದು, ಒಂದೇ ಕುಡುಂಬದವರಿಗೆ ವಿತರಣೆ ಮಾಡಿರುವುದಿಲ್ಲವೆಂದು ತಿಳಿಸಿರುತ್ತಾರೆ.
3) ಫಲಾನುಭವಿಗಳು ವಸತಿ ಯೋಜನೆಗಳಡಿ ಮನೆ ನಿರ್ಮಿಸಿಕೊಂಡ ನಂತರವೇ, ಚೆಕ್ ವಿತರಣೆ ಮಾಡಲಾಗಿದೆ.
4) ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಕಾಮಗಾರಿಗಳಿಗೆ ಟೆಂಡರ್ ಕರೆಯುವ ಅಗತ್ಯವಿರುವುದಿಲ್ಲ ಹಾಗೂ ಅಕುಶಲ ಕಾರ್ಮಿಕರಿಗೆ ಕೂಲಿ ನೀಡಲಾಗಿದೆ.
5) ಅಪ್ಪಸಾಬ ಶಿರಹಟ್ಟಿ ಮನೆಯಿಂದ ಸರ್ಕಾರಿ ಶಾಲೆವರೆಗೆ ಸಿ.ಸಿ. ರಸ್ತೆ ಇರುವುದಿಲ್ಲ ಹಾಗೂ ಸದರಿ ಕಾಮಗಾರಿಗೆ ಖರ್ಚು ಭರಿಸಿರುವುದಿಲ್ಲ.

ಈ ಎಲ್ಲಾ ಮಾಹಿತಿಯನ್ನು ದಿನಾಂಕ 24.02.2014 ರಂದು ಲೋಕಾಯುಕ್ತ ಸಂಸ್ಥೆಗೆ ನೀಡಿದ್ದು, ದಿನಾಂಕ 16.09.2014 ರಂದು ಬೆಳಗಾವಿ ಲೋಕಾಯುಕ್ತ ಕಛೇರಿಯಿಂದ ಇಂಗಳಿ ಗ್ರಾಮಕ್ಕೆ ಭೇಟಿ ನೀಡಿ, ಕಾಮಗಾರಿ ಪರಿಶೀಲನೆ ಮಾಡಿರುವುದಾಗಿ ತಿಳಿಸಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಮಾನ್ಯ ಉಪಲೋಕಾಯುಕ್ತ ವರದಿಯನ್ವಯ ಸದರಿಯವರ ವಿರುದ್ಧ ಆರೋಫಗಳ ಸಾಬೀತಾಗಿರುವ ಹಿನ್ನೆಲೆಯಲ್ಲಿ, ಉಪಲೋಕಾಯುಕ್ತ ವರದಿಯಲ್ಲಿನ ಶಿಫಾರಸ್ಸಿನಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43ಎ ರನ್ವಯ ಇವರನ್ನು ದುರ್ನಡತೆ ಎಸಗಿರುವ ಆರೋಪದ ಮೇಲೆ ಸದರಿ ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 677 ಗ್ರಾಪಂಅ 2017 ಬೆಂಗಳೂರು, ದಿನಾಂಕ: 19.10.2017**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಅಜಿತ್‌ಕುಮಾರ್ ಅಣ್ಣಾಸಾಹೇಬ್ ಚಿಗರೆ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಇಂಗಳಿ ಗ್ರಾಮ ಪಂಚಾಯತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಇಂಗಳಿ ಗ್ರಾಮ ಪಂಚಾಯತಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಮತ್ತು ವಸತಿ ಯೋಜನೆ ಅನುಷ್ಠಾನದಲ್ಲಿ ಅವ್ಯವಹಾರ ಎಸಗಿ, ಹಣ ದುರುಪಯೋಗಪಡಿಸಿಕೊಂಡು ಕರ್ತವ್ಯಲೋಪ ಎಸಗಿರುವ ಸಂಬಂಧ, ತನ್ನ ಕರ್ತವ್ಯಗಳನ್ನು ನಿರ್ವಹಿಸುವಾಗ ದುರ್ನಡತೆಯ ಅಥವಾ ತಲೆ ತಗ್ಗಿಸುವಂಥ ನಡತೆಯ ತಪ್ಪಿತಸ್ಥನಾಗಿರುವ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43ಎ ರನ್ವಯ ಕ್ರಮ ಜರುಗಿಸಿ, ಶ್ರೀ ಅಜಿತ್‌ಕುಮಾರ್ ಅಣ್ಣಾಸಾಹೇಬ್ ಚಿಗರೆ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಇಂಗಳಿ ಗ್ರಾಮ ಪಂಚಾಯತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರನ್ನು ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲ್ಲೂಕಿನ ಇಂಗಳಿ ಗ್ರಾಮ ಪಂಚಾಯತಿಯ ಸದಸ್ಯ ಸ್ಥಾನದಿಂದ ತೆಗೆದು ಹಾಕಿ ಆದೇಶಿಸಿದೆ.

*(ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರಿಂದ ಅನುಮೋದಿತ)*

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

21/x/17

**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಪ್ರತಿ:</u>**

1) ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
3) ಕಾರ್ಯನಿರ್ವಾಹಕ ಅಧಿಕಾರಿ, ಚಿಕ್ಕೋಡಿ ತಾಲ್ಲೂಕು ಪಂಚಾಯತಿ, ಚಿಕ್ಕೋಡಿ, ಬೆಳಗಾವಿ ಜಿಲ್ಲೆ. (ಸದರಿಯವರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸ್ವೀಕೃತಿಯನ್ನು ಸರ್ಕಾರಕ್ಕೆ ಕಳುಹಿಸಲು ತಿಳಿಸಿದೆ)
4) ಶ್ರೀ ಅಜಿತ್‌ಕುಮಾರ್ ಅಣ್ಣಾಸಾಹೇಬ್ ಚಿಗರೆ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಇಂಗಳಿ ಗ್ರಾಮ ಪಂಚಾಯತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇಂಗಳಿ ಗ್ರಾಮ ಪಂಚಾಯತಿ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
6) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಹೆಚ್ಚುವರಿ ಪ್ರತಿ.

**<u>ಪ್ರತಿಯನ್ನು ಮಾಹಿತಿಗಾಗಿ:</u>**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.